**ವಿಧಾನ ಪರಿಷತ್ತು ಸದಸ್ಯರಾದ ಮಾನ್ಯ ಶ್ರೀ ಎಸ್ ವ್ಹಿ ಸಂಕನೂರ ಇವರು ಮಂಡಿಸಿರುವ ನಿಯಮ-330ರ ಸೂಚನೆಗೆ ಉತ್ತರ**

**ವಿಷಯ:-**

**ಖಾಸಗಿ ಅನುದಾನಿರ ಶಿಕ್ಷಣ ಸಂಸ್ಥೆಗಳಲ್ಲಿ 2015ರ ನಂತರ ನಿವೃತ್ತಿ ನಿಧನ ಹಾಗೂ ರಾಜಿನಾಮೆಯಿಂದ ತೆರವಾಗಿರುವ ಹುದ್ದೆಗಳನ್ನು ಶಿಕ್ಷಣ ಗುಣಮಟ್ಟ ಕಾಯ್ದುಕೊಳ್ಳುವ ಮತ್ತು ಇತ್ತೀಚೆಗೆ ಉಚ್ಚ ನ್ಯಾಯಾಲಯ ರಿಟ್ ಪಿಟಿಷನ್ ಸಂಖ್ಯೆ:11667/2022, ದಿನಾಂಕ:08.12.2023ರಂದು ನೀಡಿದ ತೀರ್ಪಿನ ಹಿನ್ನೆಲೆಯಲ್ಲಿ ತಕ್ಷಣವೇ ತುಂಬಿಕೊಳ್ಳಲು ಅನುಮತಿ ನೀಡುವ ಬಗ್ಗೆ ಪ್ರಸ್ತಾಪಿಸಿರುತ್ತಾರೆ.**

**ಉತ್ತರ:**

ಅನುದಾನಿತ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ರಾಜೀನಾಮೆ, ಮರಣ ಹಾಗೂ ಇನ್ನಿತರೆ ಕಾರಣಗಳಿಂದ ದಿನಾಂಕ:31.12.2015ರವರೆಗೆ ತೆರವಾಗಿರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಅನುಮತಿ ನೀಡಲಾಗಿದೆ.

ಅನುದಾನಿತ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ನಿವೃತ್ತಿ, ರಾಜೀನಾಮೆ, ಮರಣ ಹಾಗೂ ಇನ್ನಿತರೆ ಕಾರಣಗಳಿಂದ ದಿನಾಂಕ:01.01.2016 ರಿಂದ 31.12.2020ರವರೆಗೆ ಖಾಲಿ ಇರುವ ಬೋಧಕ ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಯ ಸಹಮತಿ ಕೋರಿ ಪ್ರಸ್ತಾವನೆ ಸಲ್ಲಿಸಲಾಗಿದೆ.

ಅನುದಾನಿತ ಪ್ರೌಢಶಾಲೆ ಮತ್ತು ಪದವಿಪೂರ್ವ ಕಾಲೇಜುಗಳಲ್ಲಿ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವ ಕುರಿತಂತೆ ಕರ್ನಾಟಕ ರಾಜ್ಯ ಅನುದಾನಿತ ಒಕ್ಕೂಟ ಸಂಘ, ತುಮಕೂರು ಇವರು ದಾಖಲಿಸಿದ ರಿಟ್ ಅರ್ಜಿ ಸಂಖ್ಯೆ:11667/2022, ದಿನಾಂಕ:08.12.2023ರ ತೀರ್ಪಿನ ವಿರುದ್ಧ ಉಚ್ಚ ನ್ಯಾಯಾಲಯದಲ್ಲಿ ಮೇಲ್ಮನವಿ ಸಲ್ಲಿಸಲಾಗಿದೆ.

**ಸಂಖ್ಯೆ: ಇಪಿ 139 ಎಸ್‌ಇಎಸ್ 2024**

(ಎಸ್ ಮಧುಬಂಗಾರಪ್ಪ)
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖಾ ಸಚಿವರು**